1546 = ವಿ=72=(37)

 154-72-37

**ವಿಧಾನ ಪರಿಷತ್ ಸದಸ್ಯರಾದ ಮಾನ್ಯ ಶ್ರೀ ಪುಟ್ಟಣ್ಣ ಹಾಗೂ ಡಿ ಟಿ ಶ್ರೀನಿವಾಸ್ ಇವರು ನಿಯಮ 72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ವಿಷಯ:-**

ರಾಜ್ಯದ ಅನುದಾನಿತ ಶಾಲೆಗಳಲ್ಲಿ ನಿವೃತ್ತಿ ಮರಣ ರಾಜೀನಾಮೆ ಇತ್ಯಾದಿ ಕಾರಣಗಳಿಂದ ಹಲವಾರು ಹುದ್ದೆಗಳು ಖಾಲಿ ಆಗಿವೆ. **2020** ರವರೆಗೆ ಖಾಲಿ ಇರುವ ಹುದ್ದೆಗಳನ್ನು ತುಂಬಲು ಆರ್ಥಿಕ ಇಲಾಖೆಯ ಆದೇಶದಂತೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಿಂದ ಖಾಲಿ ಆಗಿರುವ ಹುದ್ದೆಗಳನ್ನು ತುಂಬಲು ಹಲವು ತಿಂಗಳುಗಳ ಹಿಂದೆಯೇ ಅನುಮತಿ ನೀಡಿ ಆದೇಶ ಹೊರಡಿಸಲಾಗಿದೆ. ಆದರೆ ಹುದ್ದೆಗಳನ್ನು ಅನುಮೋದನೆ ಮಾಡುವ ಪ್ರಾಧಿಕಾರವಾಗಿರುವ ಆಯುಕ್ತರು ಶಾಲಾ ಶಿಕ್ಷಣ ಇಲಾಖೆ ಮತ್ತು ನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆಯವರು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅನುಮತಿ ನೀಡುತ್ತೇವೆಂದು ಜ್ಞಾಪನಾ ಮಾಡಿದ್ದರು ಸಹ ಇದುವರೆವಿಗೆ ಪ್ರಸ್ತಾವನೆಗಳನ್ನು ಸಲ್ಲಿಸಲು ಅವಕಾಶ ಮಾಡಿಕೊಡದೆ ವಿಳಂಬ ಮಾಡುತ್ತಿರುವ ವಿಷಯದ ಬಗ್ಗೆ ಪ್ರಸ್ತಾಪಿಸಿರುತ್ತಾರೆ.

**ಉತ್ತರ:**

ಸರ್ಕಾರಿ ಆದೇಶ ಸಂಖ್ಯೆ:ಇಪಿ 396 ಎಸ್ಇಎಸ್ 2021, ದಿನಾಂಕ:07-08-2024ರಲ್ಲಿ ದಿನಾಂಕ:01-01-2016 ರಿಂದ 31-12-2020 ರವರೆಗೆ ರಾಜ್ಯದ ಅನುದಾನಿತ ಪ್ರೌಢಶಾಲೆ ಮತ್ತು ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಮತ್ತು ಇತರ ಕಾರಣಗಳಿಂದ ಖಾಲಿಯಾದ ಬೋಧಕ ಹುದ್ದೆಗಳನ್ನು ನೇಮಕಾತಿ ಮಾಡಲು ಅನುಮತಿ ನೀಡಲಾಗಿದೆ.

ಸರ್ಕಾರದ ಪತ್ರ ಸಂಖ್ಯೆ:ಸಿಆಸುಇ 388 ಸೇನೇನಿ 2024 ದಿನಾಂಕ: 25-11-2024 ರನ್ವಯ ರಾಜ್ಯ ಸಿವಿಲ್ ಸೇವೆಗಳಲ್ಲಿನ ನೇಮಕಾತಿಗಳಲ್ಲಿ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಅಧಿಸೂಚನೆಗಳನ್ನು ಹೊರಡಿಸುವಂತಿಲ್ಲ ಎಂದು ಸೂಚಿಸಲಾಗಿದೆ.

ನೇಮಕಾತಿ ಪ್ರಕ್ರಿಯೆಯನ್ನು ಆನ್‌ಲೈನ್ ತಂತ್ರಾಂಶದ ಮೂಲಕ ಭರ್ತಿ ಮಾಡಬೇಕಾಗಿರುವುದರಿಂದ ಈ ಕೆಳಕಂಡಂತೆ ತಂತ್ರಾಂಶವನ್ನು ಅಭಿವೃದ್ಧಿಪಡಿಸಲು ಆಯುಕ್ತಾಲಯದಲ್ಲಿ ಕ್ರಮವಹಿಸಲಾಗುತ್ತಿದೆ.

**ತಂತ್ರಾಂಶದ ಹಂತಗಳು:**

1. ಕ್ಷೇತ್ರ ಶಿಕ್ಷಣಾಧಿಕಾರಿಗಳ ಲಾಗಿನ್‌ನಲ್ಲಿ ಅನುದಾನಿತ ಶಾಲೆಗಳ ಮಂಜೂರಾದ/ಕಾರ್ಯನಿರತ ಮತ್ತು ಅರ್ಹ ಖಾಲಿ ಹುದ್ದೆಗಳ ಮಾಹಿತಿ ಇಂದೀಕರಿಸುವುದು.
2. ಆಡಳಿತ ಮಂಡಳಿಯಿಂದ ಖಾಲಿ ಹುದ್ದೆ ಭರ್ತಿಗೆ ಅನುಮತಿ ಕೋರಿ ಸಂಬಂಧಿಸಿದ ಆಯುಕ್ತಾಲಯಗಳಿಗೆ ಪ್ರಸ್ತಾವನೆ ಸಲ್ಲಿಕೆ.
3. ಆಯಾ ಆಯುಕ್ತಾಲಯಗಳಲ್ಲಿ ಸಮಿತಿಗಳನ್ನು ರಚಿಸಿ ಪ್ರಸ್ತಾವನೆಗಳನ್ನು ಪರಿಶೀಲಿಸಿ ಶಿಫಾರಸ್ಸು ಮಾಡುವುದು. ಶಿಫಾರಸ್ಸು ಆಧರಿಸಿ ಖಾಲಿ ಹುದ್ದೆ ಭರ್ತಿಗೆ ಅನುಮತಿ ನೀಡುವುದು.
4. ಆಡಳಿತ ಮಂಡಳಿಗಳು ಅನುಮತಿಸಿದ ಹುದ್ದೆಗಳಿಗೆ ನಿಯಮಾನುಸಾರ ನೇಮಕಾತಿ ಪ್ರಕ್ರಿಯೆ ಕೈಗೊಂಡು ಸಂಬಂಧಿಸಿದ ಉಪನಿರ್ದೇಶಕರಿಗೆ ನೇಮಕಾತಿ ಅನುಮೋದನೆಗೆ ಆನ್‌ಲೈನ್‌ನಲ್ಲಿ ಪ್ರಸ್ತಾವನೆ ಸಲ್ಲಿಕೆ.
5. ಉಪನಿರ್ದೇಶಕರಿಂದ ಪರಿಶೀಲಿಸಿ ಸಂಬಂಧಿಸಿದ ಆಯುಕ್ತಾಲಯಗಳಿಗೆ ಆನ್‌ಲೈನ್‌ನಲ್ಲಿ ಪ್ರಸ್ತಾವನೆಗಳ ಸಲ್ಲಿಕೆಯಾದ ನಂತರ ಆಯುಕ್ತಾಲಯಗಳಿಂದ ಸರ್ಕಾರಕ್ಕೆ ಆನ್‌ಲೈನ್‌ನಲ್ಲಿ ಪ್ರಸ್ತಾವನೆಯನ್ನು ಅನುಮೋದನೆ ಸಲ್ಲಿಸಲು ಕ್ರಮವಹಿಸಲಾಗುವುದು.

**ಸಂಖ್ಯೆ: ಇಪಿ 30 ಎಸ್ಇಎಸ್ 2025**

(ಎಸ್ ಮಧುಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ
ಇಲಾಖಾ ಸಚಿವರು



Generated from eOffice by MADHU BANGARAPPA, MIN-PSE(MB), MINISTER, MINISTER-PRIMARY AND SECONDARY EDUCA on 01/02/2025 02:19 PM